# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಯೋಜನೆಗಳಿಗೆ 2022-23ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ:04-04-2022.
2. ಸರ್ಕಾರದ ಆದೇಶ ಸಂಖ್ಯೆ: MWD 118 MDS 2022, ದಿನಾಂಕ:08-04-2022.
3. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವ್ಯವಸ್ಥಾಪಕ ನಿರ್ದೇಶಕರು, ಕೆ.ಎಂ.ಡಿ.ಸಿ., ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ನಿಬಂಧಕರು, ಕರ್ನಾಟಕ ಉರ್ದು ಅಕಾಡಮಿ ಇವರುಗಳ ಪ್ರಸ್ತಾವನೆಗಳು.

## ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಸರ್ಕಾರದ ಆದೇಶದಲ್ಲಿ ಆರ್ಥಿಕ ಇಲಾಖೆಯು 2022-23ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನದಲ್ಲಿ ಶೇ25% ರಷ್ಟು ಅನುದಾನವನ್ನು ನಿಗಧಿತ ಕಾಲದಲ್ಲಿ ಸಂಬಂಧಪಟ್ಟ ಇಲಾಖೆಯವರು ವೆಚ್ಚ ಮಾಡಲು ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿನ ಸರ್ಕಾರದ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2022-23ನೇ ಸಾಲಿನವರೆಗೆ ಮುಂದುವರೆಸಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಆರ್ಥಿಕ ಇಲಾಖೆಯು ಖಜಾನೆ-2 ನಲ್ಲಿ ಬಿಡುಗಡೆ ಮಾಡಿರುವಂತೆ ಮೊದಲನೇ ತ್ರೈಮಾಸಿಕ ಕಂತಿನ ಶೇ.25%ರಷ್ಟು (ಏಪ್ರಿಲ್, ಮೇ & ಜೂನ್-2022) ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ,ನಿಯಮಿತ, ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಹಾಗೂ ನಿಬಂಧಕರು, ಕರ್ನಾಟಕ ಉರ್ದು ಅಕಾಡಮಿ, ಅಧೀನ ಇಲಾಖೆರವರು ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ.

........2

S.A